# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 548 |
| **ಸದಸ್ಯರ ಹೆಸರು** | : | ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವವರು** | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| **ಉತ್ತರಿಸಬೇಕಾದ ದಿನಾಂಕ** | : | 30.01.2026. |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬಾಗಲಕೋಟೆ ಜಿಲ್ಲೆಯ ಹುನಗುಂದ, ಇಳಕಲ್ ತಾಲ್ಲೂಕುಗಳಲ್ಲಿ 17 ಹಾಗೂ ಬೀಳಗಿಯಲ್ಲಿ 4 ಅಂಗನವಾಡಿ ಕಟ್ಟಡಗಳನ್ನು ನಿರ್ಮಾಣ ಮಾಡಲು ಒಟ್ಟು 21 ಸಿ.ಎ. ಸೈಟ್‌ಗಳನ್ನು ಖರೀದಿ ಮಾಡಲು ತಗಲುವ ವೆಚ್ಚವನ್ನು ಸರ್ಕಾರವು ಬಿಡುಗಡೆ ಮಾಡಲು ಮುಂದಾಗದೇ ಇರುವ ಅಂಶವು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಾಗಲಕೋಟೆ ಜಿಲ್ಲೆಯ ಹುನಗುಂದ, ಇಳಕಲ್ ತಾಲ್ಲೂಕುಗಳಲ್ಲಿ 17 ಹಾಗೂ ಬೀಳಗಿಯಲ್ಲಿ 4 ಅಂಗನವಾಡಿ ಕಟ್ಟಡಗಳನ್ನು ನಿರ್ಮಾಣ ಮಾಡಲು ಒಟ್ಟು 21 ಸಿ. ಎ. ನಿವೇಶನಗಳನ್ನು ಖರೀದಿಸಲು ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಅನುದಾನ ಬಿಡುಗಡೆಗಾಗಿ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿದೆ.</td></tr>
<tr><td>ಆ)</td><td>ಬಂದಿದ್ದರೆ, ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಅನುದಾನ ಬಿಡುಗಡೆ ಮಾಡುವುದು ಯಾವಾಗ; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?</td><td>ಹುನಗುಂದ, ಇಳಕಲ್, ಬೀಳಗಿ ಮತಕ್ಷೇತ್ರದಲ್ಲಿ ಕಳೆದ 3 ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ಮಂಜೂರು ಮಾಡಲಾದ ಅಂಗನವಾಡಿ ಕಟ್ಟಡಗಳ ವಿವರ ಈ ಕೆಳಗಿನಂತಿದೆ.
<table>
<tr><th>ಮತಕ್ಷೇತ್ರದ ಹೆಸರು</th><th>2022-23</th><th>2023-24</th><th>2024-25</th><th>2025-26</th></tr>
<tr><td>ಬೀಳಗಿ</td><td>1</td><td>1</td><td>2</td><td>1</td></tr>
<tr><td>ಹುನಗುಂದ</td><td>8</td><td>0</td><td>1</td><td>1</td></tr>
<tr><td>ಇಳಕಲ್</td><td>14</td><td>0</td><td>0</td><td>1</td></tr>
<tr><td>ಒಟ್ಟು</td><td>23</td><td>1</td><td>3</td><td>3</td></tr>
</table>
ನಿವೇಶನ ಹಾಗೂ ಅನುದಾನದ ಲಭ್ಯತೆಯ ಆಧಾರದ ಮೇರೆಗೆ ಹಂತ ಹಂತವಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕ್ರಮವಹಿಸಲಾಗುತ್ತಿದೆ.</td></tr>
</table>

**ಸಂಖ್ಯೆ: ಮಮಇ 49 ಐಸಿಡಿ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು